ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಇಲಾಖೆಯ ಧನಸಹಾಯ ವ್ಯವಸ್ಥೆಯನ್ನು ನಂಬಿದ ಬಡ ಕಲಾವಿದರ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಹಾಗೂ ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು):-

264 (443+382) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದರಗಾಮಿ ಯೋಜನೆಗಳಾದ ಕನ್ನಡ ಶಾಸ್ತ್ರೀಯ ಉನ್ನತ ಅಧ್ಯಯನ ಕೇಂದ್ರಕ್ಕೆ ಸ್ವಾಯತ್ತೆಯಂಥ ಕಾರ್ಯಕ್ರಮಗಳು ಸಮಸ್ಯೆಯಲ್ಲಿ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಲಾಖೆಯ ಧನಸಹಾಯ ವ್ಯವಸ್ಥೆಯನ್ನು ನಂಬಿ ಬದುಕು ಕಟ್ಟಿಕೊಂಡ ಕಲಾವಿದರಿಗೆ ಧನಸಹಾಯಕ್ಕೆ ಹಣ ನಿಗಧಿ ಮಾಡದೆ ಕಲಾವಿದರ ಜೀವನ ನಡೆಸಲು ಸಾಧ್ಯವಾಗದಿರುವುದು ನಿಜವೇ ; ಕಳೆದ ವರ್ಷ ಅರ್ಜಿ ಪಡೆದು ಸಂಸ್ಥೆಗಳನ್ನು ಆಯ್ಕೆ ಮಾಡಿ ಸರ್ಕಾರದ ಆದೇಶವು ಆಗಿರುವ ಸಂಸ್ಥೆಗಳಿಗೆ ಹಣ ಬಿಡುಗಡೆಯಾಗಿದ್ದು ಗಡಿ ಅಭಿವೃದ್ಧಿ ಪ್ರಾಧಿಕಾರ ಖಾತೆಯಲ್ಲಿ ರೂ. 12 ಕೋಟಿಗೂ ಹೆಚ್ಚು ಹಣ ಇರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಧನಸಹಾಯಕ್ಕೆ ನಿಗಧಿಯಾದ ಹಣವನ್ನು ಬಡ ಕಲಾವಿದರಿಗೆ ಯಾವ ಕಾಲಮಿತಿಯಲ್ಲಿ ವಿತರಿಸಲು ಸರ್ಕಾರ ಚಿಂತಿಸಿದೆ ; ಮತ್ತು ಈ ಬಗ್ಗೆ ಕೈಗೊಂಡ ಕ್ರಮಗಳೇನು ?